ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 7, 2020**

# ಪತ್ರಿಕಾ ಪ್ರಕಟಣೆ

## ಸಚಿವರ ಪ್ರವಾಸ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :**

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಜಗದೀಶ್ ಶೆಟ್ಟರ್ ಅವರು ಮೇ 8 ರಂದು ಮೈಸೂರು, ಮಂಡ್ಯ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

## ಚೆಕ್‌ಮೇಟ್ ಕೋವಿಡ್ ಆನ್‌ಲೈನ್ ಚೆಸ್ ವತಿಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 15 ಲಕ್ಷ ರೂ ನೀಡಿಕೆ

**ಬೆಂಗಳೂರು, ಮೇ 7( ಕರ್ನಾಟಕ ವಾರ್ತೆ ) :**

ಚೆಕ್‌ಮೇಟ್ ಕೋವಿಡ್ ಆನ್‌ಲೈನ್ ಚೆಸ್ ಟೂರ್ನಮೆಂಟ್‌ನಲ್ಲಿ ಒಟ್ಟು 2.37 ಲಕ್ಷ ಆನ್‌ಲೈನ್ ಚೆಸ್ ಪಂದ್ಯಾಟಗಳು ನಡೆದಿದ್ದು ನೋಂದಣಿ ಶುಲ್ಕದಿಂದ ಸಂಗ್ರಹವಾದ ಮೊತ್ತದೊಂದಿಗೆ ಎಂ.ಪಿ.ಎಲ್ ಸಂಸ್ಥೆಯು ನೀಡಿದ ಮೊತ್ತ ಸೇರಿ ಒಟ್ಟು 15 ಲಕ್ಷ ರೂ.ಗಳನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾಯಿತು.

ಛಾಯಾಚಿತ್ರ ಲಗತ್ತಿಸಿದೆ)

ಸಂಕಷ್ಟದಲ್ಲಿದ್ದ ಕ್ರೀಡಾಪಟು ಜಯದೀಬನ್ ರಾಮಮೂರ್ತಿ ಅವರಿಗೆ ಕ್ರೀಡಾ ಸಚಿವರಿಂದ 25,000ರೂ ಸಹಾಯಧನ

## ಸಹಾಯಧನ ವಿತರಣೆ

ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :

ಪ್ಯಾರಾ ಬ್ಯಾಡ್ಮಿಂಟನ್ ಕ್ರೀಡಾಪಟು ಶ್ರೀ ಜಯದೀಬನ್ ರಾಮಮೂರ್ತಿ ಇವರು ಕೋವಿಡ್-19 ಲಾಕ್‌ಡೌನ್ ಹಿನ್ನೆಲೆಯಲ್ಲಿ ಸಂಕಷ್ಟ ಪರಿಸ್ಥಿತಿಯಲ್ಲಿದ್ದ ಹಿನ್ನೆಲೆಯಲ್ಲಿ ಕ್ರೀಡಾ ಸಚಿವ ಸಿ.ಟಿ. ರವಿ ಅವರು ಕರ್ನಾಟಕ ಕ್ರೀಡಾ ಪ್ರಾಧಿಕಾರದ ವತಿಯಿಂದ 25,000/- ಸಹಾಯಧನವನ್ನು ಮೇ 7ರಂದು ವಿಧಾನಸಸೌಧದ ತಮ್ಮ ಕಚೇರಿಯಲ್ಲಿ ವಿತರಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಕೆ.ಪಿ. ಪುರುಷೋತ್ತಮ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಕೆ. ಶ್ರೀನಿವಾಸ್ ಉಪಸ್ಥಿತರಿದ್ದರು.

ಬೆಂಗಳೂರಿನ ಬೆನ್ಸನ್ ಟೌನ್ ನಿವಾಸಿಯಾದ ಜಯದೀಬನ್ ರಾಮಮೂರ್ತಿ ಅವರು ಜೀವನೋಪಾಯಕ್ಕಾಗಿ ಖಾಸಗಿ ಸಂಸ್ಥೆಯಲ್ಲಿ ತಾತ್ಕಾಲಿಕ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಲಾಕ್‌ಡೌನ್ ಹಿನ್ನೆಲೆಯಲ್ಲಿ ದೈನಂದಿನ ಅಗತ್ಯತೆಗೆ ಹಣವಿಲ್ಲದೆ ತುಂಬಾ ಕಷ್ಟದಲ್ಲಿದ್ದು, ಅವರ ಕ್ಯಾಲಿಪರ್ಸ್ ಸಹ ಹಾಳಾಗಿ ಸಂಚರಿಸಲು ಕಷ್ಟಸಾಧ್ಯವಾಗಿತ್ತು. ಮಾನವೀಯ ದೃಷ್ಟಿಯಿಂದ ಇದನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ಸಹಾಯಧನ ನೀಡಲಾಗಿದೆ ಎಂದು ಕ್ರೀಡಾ ಇಲಾಖೆ ಪ್ರಕಟಣೆ ತಿಳಿಸಿದೆ.

(ಛಾಯಾಚಿತ್ರ ಲಗತ್ತಿಸಿದೆ)

## ಪರಿಶಿಷ್ಟ ಸಮುದಾಯಕ್ಕೆ ಆಸ್ತಿಯಾಗಿ ಸೃಜನೆಯಾಗುವ ಕಾರ್ಯಕ್ರಮಗಳನ್ನು ರೂಪಿಸಲು ಗೋವಿಂದ ಎಂ ಕಾರಜೋಳ ಸೂಚನೆ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :** 2020-21 ನೇ ಸಾಲಿನ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದವರಿಗೆ ಆಸ್ತಿಯಾಗಿ ಸೃಜನೆಯಾಗುವಂತಹ ಯೋಜನೆಗಳು/ ಕಾರ್ಯಕ್ರಮಗಳ ಕ್ರಿಯಾ ಯೋಜನೆಯನ್ನು ರೂಪಿಸಬೇಕು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ಸೂಚಿಸಿದರು.

ವಿಕಾಸಸೌಧದಲ್ಲಿಂದು 2020-21 ನೇ ಸಾಲಿನ ಎಸ್‌ಸಿಪಿ ಮತ್ತು ಎಸ್‌ಟಿಪಿ ಕ್ರಿಯಾ ಯೋಜನೆಯ ಕುರಿತು ನೊಡೆಲ್ ಏಜೆನ್ಸಿ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಶಿಕ್ಷಣ, ಸ್ವಯಂ ಉದ್ಯೋಗ, ಕೌಶಲ್ಯ ಅಭಿವೃದ್ಧಿ ಹಾಗೂ ಮೂಲಭೂತಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ವಸತಿ ಇಲಾಖೆಯು ಉತ್ತಮ ಗುಣಮಟ್ಟದ ಮನೆಗಳನ್ನು ನಿರ್ಮಿಸಬೇಕು. ಕಳೆದ ವರ್ಷ ಅಪೂರ್ಣಗೊಂಡ ಮನೆಗಳನ್ನು ಪೂರ್ಣಗೊಳಿಸಬೇಕು. ಕೊರೊನಾ ಸೋಂಕಿನ ಹಿನ್ನೆಲೆಯಲ್ಲಿ ಬೇರೆ ಊರುಗಳಿಗೆ ಉದ್ಯೋಗಕ್ಕಾಗಿ ಹೋದವರು ಹೆಚ್ಚಾಗಿ ಅವರ ಗ್ರಾಮಗಳಲ್ಲಿದ್ದಾರೆ ಅವರೆಲ್ಲರಿಗೂ ಉದ್ಯೋಗ ಖಾತರಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಕೂಲಿ ಕಾರ್ಮಿಕರಿಗೆ ಕಡ್ಡಾಯವಾಗಿ ಉದ್ಯೋಗ ಕಾರ್ಡುಗಳನ್ನು ನೀಡಬೇಕು. ಕೃಷಿ ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದ ರೈತರ ಕುರಿತು ಮಾಹಿತಿ ಸಂಗ್ರಹಿಸಿ, ಸೌಲಭ್ಯಗಳನ್ನು ಸಮರ್ಪಕವಾಗಿ ವಿತರಿಸಬೇಕು. ಗಂಗಾ ಕಲ್ಯಾಣ ಯೋಜನೆಯು ಅತ್ಯುತ್ತಮವಾದ ಯೋಜನೆಯಾಗಿದ್ದು, ಕೊಳವೆ ಬಾವಿಗಳಿಗೆ ಕೂಡಲೇ ವಿದ್ಯುತ್ ಸಂಪರ್ಕವನ್ನು ಕಲ್ಪಿಸುವಂತೆ ಕ್ರಮಕೈಗೊಳ್ಳಬೇಕು. ಈ ಯೋಜನೆಯಡಿ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸಬೇಕು. ವಸತಿ ಶಾಲೆಗಳ ಆವರಣದಲ್ಲಿ ಮಳೆ ನೀರು ಕೊಯ್ಲು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು. ಅಂತರ ಜಲ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸಬೇಕು. ಎಲ್ಲಾ ಇಲಾಖೆಗಳು ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಸಂಖ್ಯೆಯ ಮಾಹಿತಿಯನ್ನು ಸಂಗ್ರಹಿಸಬೇಕು. ಯೋಜನೆವಾರು ಫಲಾನುಭವಿಗಳ ವಿವರವನ್ನು ಆಪ್ ನಲ್ಲಿ ಅಪ್ ಲೋಡ್ ಮಾಡಬೇಕು. ಬಡತನದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ರೂಪಿಸಬೇಕು. ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿ ಸಮುದಾಯದ ಕಲ್ಯಾಣಕ್ಕಾಗಿ ಸ್ವಯಂ ಪ್ರೇರಣೆಯಿಂದ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದ ಅವರು, 2019-21 ನೇ ಸಾಲಿನ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಕುಮಾರ ನಾಯಕ್, ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಸಲಹೆಗಾರರರಾದ ಇ. ವೆಂಕಟಯ್ಯ, ಡಿಸಿಎಂ ಅವರ ಆಪ್ತಕಾರ್ಯದರ್ಶಿ ವಿ. ಶ್ರೀನಿವಾಸ, ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಜರಿದ್ದರು.

## ಮುಖ್ಯಮಂತ್ರಿಗಳ ಅಧ್ಯಕ್ಷತೆಯ ಸಭೆಯಲ್ಲಿ ಯುಕೆಪಿ ತ್ವರಿತ ಕಾಮಗಾರಿಗೆ ನಿರ್ಣಯ : ಗೋವಿಂದ ಕಾರಜೋಳ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :** ಕೃಷ್ಣ ಮೇಲ್ದಂಡೆ ಯೋಜನೆಯ 3 ನೇ ಹಂತದ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಯೋಜನೆಯ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲು ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್. ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ವಿಸ್ತೃತವಾಗಿ ಚರ್ಚಿಸಿ ನಿರ್ಧಾರಕೈಗೊಳ್ಳಬೇಕು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ವಿಧಾನಸೌಧದಲ್ಲಿಂದು ನೀರಾವರಿ ಸಚಿವರಾದ ರಮೇಶ್ ಜಾರಕಿಹೊಳಿ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಯಡಿ ಶೀಘ್ರವಾಗಿ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಬೇಕು. ಇಲ್ಲವಾದರೆ ಆಲಮಟ್ಟಿ ಜಲಾಶಯದಲ್ಲಿ ನೀರು ಸಂಗ್ರಹಿಸಲಾಗುವುದಿಲ್ಲ. ಈ ಯೋಜನೆಯ ಸಮಗ್ರ ವರದಿಯನ್ನು ಸಿದ್ದಪಡಿಸಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಮಂಡಿಸಬೇಕು. ಭೂ ಸ್ವಾಧೀನ ಅಧಿಕಾರಿಗಳನ್ನು ನಿಯೋಜಿಸುವ ಕುರಿತು ಈಗಾಗಲೇ ಮುಖ್ಯಕಾರ್ಯದರ್ಶಿಯವರು ಒಪ್ಪಿಗೆ ನೀಡಿದ್ದಾರೆ. ಶೀಘ್ರವಾಗಿ ನಿಯೋಜಿಸಲಾಗುವುದು. ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸಬೇಕು. ಯೋಜನೆಯ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಬೇಕು. ಯೋಜನೆ ಅನುಷ್ಠಾನ ವಿಳಂಭವಾಗದಂತೆ ಕ್ರಮಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಕಾನೂನು ಸಚಿವರಾದ ಮಾಧುಸ್ವಾಮಿ, ನೀರಾವರಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ರಾಕೇಶ್ ಸಿಂಗ್, ಕೃಷ್ಣಭಾಗ್ಯ ಜಲನಿಗಮದ ವ್ಯವಸ್ಥಾಪಕ ನಿರ್ದೇಶಕ ಜಯರಾಂ ಮತ್ತಿತರರು ಉಪಸ್ಥಿತರಿದ್ದರು.

## ಮುಂದುವರೆದ-ಹೊಸ ಯೋಜನೆಗಳಿಗೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಲು ಗೋವಿಂದ ಕಾರಜೋಳ ಸೂಚನೆ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :** ಲೋಕೋಪಯೋಗಿ ಇಲಾಖೆಯು ಈ ವರ್ಷ ಅನುಷ್ಠಾನಗೊಳಿಸಲಿರುವ ಮುಂದುವರೆದ ಹಾಗೂ ಹೊಸ ಯೋಜನೆಗಳನ್ನು ಕಡ್ಡಾಯವಾಗಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯಬೇಕು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ಸೂಚಿಸಿದರು.

ವಿಧಾನಸೌಧದಲ್ಲಿಂದು ಲೋಕೋಪಯೋಗಿ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಆರ್ಥಿಕ ಇಲಾಖೆಯು ಹೊರಡಿಸಿದ ಮುಂದುವರೆದ ಹಾಗೂ ಹೊಸ ಯೋಜನೆಗಳಿಗೆ ಸಂಬಂಧಿಸಿದಂತೆ ಆದೇಶ ಹೊರಡಿಸುವ ಬಗ್ಗೆ ಸುತ್ತೋಲೆ ಹೊರಡಿಸಿದ್ದು, ಅದರಂತೆ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ಕೈಗೊಳ್ಳಬೇಕಾದ ಅತೀ ಪ್ರಾಮುಖ್ಯವಾದ ಕಾಮಗಾರಿಗಳು ಹಾಗೂ ಯೋಜನೆಗಳನ್ನು ಮುಂದುರೆಸುವ ಬಗ್ಗೆ ಆದ್ಯತಾ ಪಟ್ಟಿಯನ್ನು ತಯಾರಿಸಿ,

ಇವುಗಳನ್ನು ಕೈಗೊಳ್ಳಲು ಪ್ರತ್ಯೇಕವಾಗಿ ಕಡತಗಳನ್ನು ಆರ್ಥಿಕ ಇಲಾಖೆಯ ಅನುಮೋದನೆ ಕಳುಹಿಸಿ, ಅನುಮೋದನೆ ಪಡೆದ ನಂತರವೇ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಅಪರ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್, ಕಾರ್ಯದರ್ಶಿ ಬಿ. ಗುರುಪ್ರಸಾದ್ ಹಾಗೂ ಎಲ್ಲಾ ನಿಗಮ, ವಲಯ, ಘಟಕಗಳ ಮುಖ್ಯಸ್ಥರು ಹಾಜರಿದ್ದು, ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

# ನೀರಿನ ಬಿಲ್ ಪಾವತಿ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :** ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ**. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.05.2020 ರಿಂದ 07.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ವಿವರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿರುವುದು. ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 01.05.2020 ರಿಂದ 07.05.2020 ರವರೆಗೆ ದಾಖಲುಗೊಂಡ ಒಟ್ಟು 31 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 22 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 5 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 03 **ಮಾದರಿಯ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 02 ಮಾದರಿಯ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 04 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

**ನಗರದಲ್ಲಿ ಕೋವಿಡ್ -19 ಹರಡುತ್ತಿರುವ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಬೇಕಾಗಿರುವ ಕಾರಣ ಜಲಮಂಡಳಿಯ ಮಾಪನ ಓದುಗರು ಮನೆಮನೆಗೆ ತೆರಳಿ ನೀರಿನ ಬಿಲ್‌ಅನ್ನು ವಿತರಿಸಲು ಸಾಧ್ಯವಾಗದಿರುವುದರಿಂದ ನೀರಿನ ಬಿಲ್‌ನ ಮಾಹಿತಿಯನ್ನು ಜಲಮಂಡಳಿಯಲ್ಲಿ ಲಭ್ಯವಿರುವ ಗ್ರಾಹಕರ ಮೊಬೈಲ್ ನಂಬರ್‌ಗಳಿಗೆ ವಾಚನ ದಿನವಹಿ ಎಸ್.ಎಂ.ಎಸ್.ಮುಖಾಂತರ ಕಳುಹಿಸಲಾಗುತ್ತಿದ್ದು, ಎಸ್.ಎಂ.ಎಸ್.ನಲ್ಲಿರುವ ಲಿಂಕ್ ಮುಖಾಂತರ ನೀರಿನ ಬಿಲ್‌ಅನ್ನು ಪಾವತಿಸಬಹುದಾಗಿರುತ್ತದೆ.**

**ಗ್ರಾಹಕರು ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ತಮ್ಮ ಹೆಸರು, ಆರ್.ಆರ್. ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಯನ್ನು ಕಳುಹಿಸಿ ನೋಂದಾಯಿಸಿಕೊಂಡಲ್ಲಿ ನೀರಿನ ಬಿಲ್ಲಿನ ವಿವರವನ್ನು ತಮ್ಮ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಕಳುಹಿಸಲಾಗುವುದು.**

**ಇದಲ್ಲದೆ ಜಲಮಂಡಳಿಯ ಅಧಿಕೃತ ವೆಬ್‌ಸೈಟ್ : www.bwssb.gov.in ನಲ್ಲಿ ಎಲ್ಲಾ ಗ್ರಾಹಕರ ಬಿಲ್‌ಗಳನ್ನು ವಾಚನ ದಿನವಹಿ ಪ್ರಕಟಿಸಲಾಗುತ್ತಿದ್ದು, ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿರುತ್ತದೆ ಹಾಗೂ ಮಂಡಳಿಯ ಆ್ಯಪ್ ಆಗಿರುವ "BWSSB Payment App" ಮುಖಾಂತರ Quick Pay ಮಾಡಬಹುದಾಗಿರುತ್ತದೆ. ಮಂಡಳಿಯ ವೆಬ್‌ಸೈಟ್‌ನಲ್ಲಿ "BWSSB Payment App" ನ ಲಿಂಕ್ ಲಭ್ಯವಿದ್ದು, Google Play store ನಲ್ಲಿಯೂ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ನೀರಿನ ಬಿಲ್ ಪಾವತಿಯನ್ನು ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.**

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:**www.bwssb.gov.in** ನಲ್ಲಿ ಪಡೆಯಬಹುದಾಗಿರುತ್ತದೆ.

## Payment of water bills and steps taken to prevent cholera

BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.05.2020 to 07.05.2020 tested the samples and results of the samples are enclosed with this letter. The abstract of the result is as mentioned below.

Among the 31 cases reported from 01.05.2020 to 07.05.2020, samples from 22 area was not collected since water supply for that area was not on the day when the water sample were collected, samples from 05 area were collected and result of **03 sample was obtained as suitable for potable purpose(SPP**). Result of 02 sample is awaited. The areas of remaining 04 cases does not comes under BWSSB limits.

**Since COVID-19 is spreading in the city rapidly, in the view of maintaining social distance, BWSSB's meter reader cannot issue the bill by taking meter reading from each house. Water bill details are being sent through SMS reading day wise for the mobile numbers of customers that are available in the Board and payment can be made by clicking on the link provided in the SMS.**

**All customers are requested to register the details by sending their name, R.R. Number and mobile number to 24/7 BWSSB call center whatsapp number :8762228888 and thus water bill details will be sent to their registered mobile number through SMS**

**Along with this, water bills of all consumers are being published reading day wise in BWSSB official website: www.bwssb.gov.in and payment can be made through the website. BWSSB's App called "BWSSB Payment App" is also available and Quick Pay can be made**

**<u>through this app. Customers can login to the app via the link provided in BWSSB official website and app can also be downloaded from Google pay store. Payment can also be made through online services of BBPS (Bharath Bill Payment System) like Paytm, Phone pe, Google pay etc</u>**.

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .**

# ಶಾಲಾ ಪಠ್ಯಗಳ ಕಡಿತ: ಸಚಿವ ಸುರೇಶ್ ಕುಮಾರ್ ಇಂಗಿತ

**ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :** ಕೋವಿಡ್ ನಿಂದಾಗಿ ನಿಗದಿತ ದಿನಾಂಕಕ್ಕೆ ಶೈಕ್ಷಣಿಕ ವರ್ಷ ಪ್ರಾರಂಭವಾಗುವ ಸಾಧ್ಯತೆಗಳು ಕಡಿಮೆ ಇದ್ದು, ಅದಕ್ಕೆ ಸರಿಹೊಂದುವಂತೆ ಶೈಕ್ಷಣಿಕ ವರ್ಷವನ್ನು ಸರಿದೂಗಿಸಬೇಕಾದ ಅಗತ್ಯವಿರುವುದರಿಂದ ಶಾಲಾ ಶೈಕ್ಷಣಿಕ ಪಠ್ಯವನ್ನು ಆ ಅವಧಿಗೆ ತಕ್ಕಂತೆ ರೂಪಿಸಬೇಕೆಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗುರುವಾರ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಈ ಕುರಿತು ಚರ್ಚಿಸಿದ ಸಚಿವರು ಈ ಶೈಕ್ಷಣಿಕ ಸಾಲಿನ ಪ್ರಾರಂಭದ ಬಗ್ಗೆ ಈ ಹಂತದಲ್ಲಿ ನಿರ್ಣಯಿಸಲು ಸಾಧ್ಯವಾಗದ ಕಾರಣ 1ರಿಂದ 10ನೇ ತರಗತಿ ಹಾಗೂ ಪದವಿ ಪೂರ್ವ ಶಿಕ್ಷಣದ ಪಠ್ಯಕ್ರಮದಲ್ಲಿ ಹೆಚ್ಚುವರಿ ಎನ್ನುವ ಪಠ್ಯವನ್ನು ಗುರುತಿಸುವ ಪ್ರಯತ್ನಕ್ಕೆ ಕೂಡಲೇ ಚಾಲನೆ ನೀಡಬೇಕೆಂದರು.

ಶೈಕ್ಷಣಿಕ ವರ್ಷದಲ್ಲಿ ಕಳೆದುಕೊಳ್ಳುವ ಅವಧಿಯ ಆಧಾರದ ಮೇಲೆ ಮಕ್ಕಳ ಕಲಿಕೆಗೆ ಹೊರೆಯಾಗದ ರೀತಿಯಲ್ಲಿ ಅನವಶ್ಯಕ ಪುನರಾವರ್ತಿತವಾದ ಪಠ್ಯವನ್ನು ಕೈಬಿಡಬೇಕು. ಅತ್ಯಾವಶ್ಯಕವಾದ ಪಠ್ಯವನ್ನು ಉಳಿಸಿಕೊಳ್ಳಲು ಕ್ರಿಯಾ ಯೋಜನೆಯನ್ನು ಕೂಡಲೇ ಸಿದ್ಧಪಡಿಸಬೇಕು. ಕೊರೋನಾ ಹಿನ್ನೆಲೆಯಲ್ಲಿ ಶೈಕ್ಷಣಿಕ ವರ್ಷದಲ್ಲಿ ಕಡಿತವಾಗಬಹುದಾದ ಅವಧಿಯ ಆಧಾರದಲ್ಲಿ ಪ್ರತಿ ತರಗತಿ ಹಾಗೂ ಪ್ರತಿ ವಿಷಯಕ್ಕೆ ಸಂಬಂಧಿಸಿದಂತೆ 15 ದಿನಗಳ, 1 ತಿಂಗಳ, ಒಂದುವರೆ ತಿಂಗಳ, 2 ತಿಂಗಳ ಹಂತವಾರು ಹೆಚ್ಚುವರಿಯಾಗಬಹುದಾದ ಪಠ್ಯಗಳನ್ನುಗುರುತಿಸಿ ಅವುಗಳನ್ನು ಕೈಬಿಡುವ ಬಗ್ಗೆ ವಿಸ್ತೃತ ವರದಿ ತಯಾರಿಸಬೇಕೆಂದು ಸಚಿವರು ಸೂಚಿಸಿದರು.

**ಕೋವಿಡ್ ಕುರಿತ ಪಠ್ಯಕ್ರಮ ಜಾರಿ:**

ಇದೇ ಶೈಕ್ಷಣಿಕ ಸಾಲಿನಿಂದ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸಾಮಾಜಿಕ ಹೊಂದಾಣಿಕೆಗಳ ಬಗ್ಗೆ ಪಠ್ಯವನ್ನು ಎಲ್ಲ ತರಗತಿಗಳಿಗೆ ಬೋಧಿಸುವಲ್ಲಿ ಕೂಡಲೇ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲು ಇಲಾಖೆಯ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಸೂಚನೆ ನೀಡಿದ ಸಚಿವರು, ಕೋವಿಡ್-19 ಕುರಿತಂತೆ ಆಯಾ ವಯೋಮಾನದ ವಿದ್ಯಾರ್ಥಿಗಳಿಗೆ ಆಕರ್ಷಣೀಯವಾಗುವ ರೀತಿಯಲ್ಲಿ ಕಿರುಪಠ್ಯ ರಚನೆ ಮಾಡಿ ಶಾಲೆಗಳಿಗೆ ಪೂರೈಸುವುದರ ಜೊತೆಗೆ ಶಿಕ್ಷಕರ ತರಬೇತಿ ಪಠ್ಯಕ್ರಮದಲ್ಲಿಯೂ ಈ ಕುರಿತಾದ ಅಂಶಗಳನ್ನು ಅಳವಡಿಸಿಕೊಳ್ಳಬೇಕು ಎಂದರು. ಇದು ಪಠ್ಯಕ್ರಮದ ಒಂದು ಭಾಗವಾಗಿ ಕಡ್ಡಾಯವಾಗಿ ಕಲಿಯಬೇಕಾದ ವಿಷಯವಾಗಿರುವಂತೆ ಕಟ್ಟುನಿಟ್ಟಾಗಿ ಅನುಷ್ಠಾನವಾಗುವಂತೆ ನೋಡಿಕೊಳ್ಳಬೇಕು ಎಂದು ಸಹ ಅವರು ಸೂಚಿಸಿದರು.

**ಯೂ-ಟ್ಯೂಬ್ ಚಾನೆಲ್ ಬೋಧನೆ:**

ಮಕ್ಕಳವಾಣಿ ಯೂ-ಟ್ಯೂಬ್ ಚಾನೆಲ್ ಇಡೀ ರಾಷ್ಟ್ರದ ಗಮನ ಸೆಳೆದಿದ್ದು, ಮಾಹಿತಿ ತಂತ್ರಜ್ಞಾನಾಧಾರಿತವಾದ ಬೋಧನೆಯನ್ನೂ ಸಹ ನಾವು ಪೂರಕ ಕಲಿಕೆಯಾಗಿ ಅಳವಡಿಸಿಕೊಳ್ಳಬೇಕಾದ ಅನಿವಾರ್ಯತೆ ಇರುವ ಹಿನ್ನೆಲೆಯಲ್ಲಿ 1ರಿಂದ 10ನೇ ತರಗತಿವರೆಗೆ ವಿಷಯವಾರು, ಅಧ್ಯಾಯವಾರು ಆಂಗ್ಲ ಮತ್ತು ಕನ್ನಡ ಮಾಧ್ಯಮಗಳ ಬೋಧನೆಯನ್ನು ಉತ್ತಮ ಶಿಕ್ಷಕರನ್ನು ಆಯ್ಕೆ ಮಾಡಿ ಚಿತ್ರೀಕರಿಸಿ ಯೂ-ಟ್ಯೂಬ್ ಚಾನೆಲ್ ನಲ್ಲಿ ಶಾಶ್ವತವಾಗಿ ಲಭ್ಯವಿರುವಂತೆ ಮಾಡಲು ಸುರೇಶ್ ಕುಮಾರ್ ಸೂಚನೆ ನೀಡಿದರು.

ಅಂತೆಯೇ ಸಾಮಾಜಿಕ ಅಂತರ ನಮ್ಮ ಬದುಕಿನ ಸಹಜ ರೀತಿಯಾಗುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಶಾಲೆಯ ಆವರಣದಲ್ಲಿ ಅಂತರವನ್ನು ಕಾಯ್ದುಕೊಳ್ಳುವ ರೀತಿಯ ಕಲಿಕಾ ವಾತಾವರಣ ಕಲ್ಪಿಸುವ ಜವಾಬ್ದಾರಿ ಶಿಕ್ಷಣ ಇಲಾಖೆಯದ್ದಾಗಿದ್ದು, ಪರ್ಯಾಯ ಮಾರ್ಗಗಳ ಕುರಿತಂತೆ ಕೂಡಲೇ ಕ್ರಿಯಾ ಯೋಜನೆ ಸಿದ್ಧಪಡಿಸಲೂ ಸಹ ಸಚಿವರು ಸೂಚಸಿದರು.

ಇಂತಹ ಸಂದರ್ಭದಲ್ಲಿ ಪೋಷಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಶಾಲೆಗಳ ಕಲಿಕಾ ವಾತಾವರಣದ ಕುರಿತಂತೆ ಭರವಸೆಯನ್ನು ಮೂಡಿಸುವುದು ಶಿಕ್ಷಣ ಇಲಾಖೆಯ ಪ್ರಥಮ ಆದ್ಯತೆಯಾಗಬೇಕಿದ್ದು, ಈ ಕುರಿತಂತೆ ಶಿಕ್ಷಕರಿಗೆ ತರಬೇತಿ ನೀಡಿಕೆ ಮತ್ತು ಸಂವೇದನೆಗೊಳಿಸುವ ಅಭಿಯಾನವನ್ನು ಕೈಗೆತ್ತಿಕೊಳ್ಳಬೇಕು. ಆರ್ ಟಿ ಇ ಅಡಿಯ ನಿರಂತರ ಕಲಿಕಾ ಮೌಲ್ಯಮಾಪನದ ಆಶಯವನ್ನು ಸಮಗ್ರವಾಗಿ ಅನುಷ್ಠಾನಗೊಳಿಸುವಲ್ಲಿ ಇಂದಿನ ಪರಿಸ್ಥಿತಿಯನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಅವರು ಹೇಳಿದರು.

ಕೋವಿಡ್ ಹಿನ್ನೆಲೆಯಲ್ಲಿ ಶೈಕ್ಷಣಿಕ ಚಟುವಟಿಕೆಗಳ ಕುರಿತಂತೆ ಕೇಂದ್ರ ಮಾನವ ಸಂಪನ್ಮೂಲ ಇಲಾಖೆಯ ಕ್ರಮಗಳ ಬಗ್ಗೆ ಅಧ್ಯಯನ ಮಾಡಿ ತಮಗೆ ವರದಿ ಸಲ್ಲಿಸಬೇಕೆಂದು ಸೂಚನೆ ನೀಡಿದ ಸಚಿವರು, ತಂತ್ರಜ್ಞಾನ ಬಳಕೆ

ದೃಷ್ಟಿಯಿಂದ ಸರ್ಕಾರದ ಮಾಹಿತಿ ತಂತ್ರಜ್ಞಾನ ವೇದಿಕೆಗಳನ್ನು ಸೂಕ್ತರೀತಿಯಲ್ಲಿ ಬಳಸಿಕೊಂಡು ನೀತಿ ನಿರೂಪಣೆಗೆ ಕ್ರಮ ವಹಿಸಲು ಸೂಚನೆ ನೀಡಿದರು.

**ಟಿಇಟಿ ಪರೀಕ್ಷಾ ದಿನಾಂಕ ನಿಗದಿಗೊಳಿಸಿ:**

ಎಸ್ ಎಸ್ ಎಲ್ ಸಿ ಪರೀಕ್ಷಾ ವೇಳಾಪಟ್ಟಿ ಪ್ರಕಟಣೆಯಾದ ಕೂಡಲೇ ಟಿಇಟಿ ಪರೀಕ್ಷಾ ದಿನಾಂಕವನ್ನು ಪ್ರಕಟಿಸಬೇಕೆಂದು ಸೂಚನೆ ನೀಡಿದ ಸಚಿವರು, ಮುಂದಿನ ದಿನಗಳಲ್ಲಿ ಈ ಪರೀಕ್ಷೆಯನ್ನು ಆನ್ ಲೈನ್ ಮೂಲಕ ನಿರ್ವಹಣೆ ಮಾಡುವಲ್ಲಿಪೂರ್ವ ಸಿದ್ಧತಾ ಕ್ರಮಗಳನ್ನು ಪ್ರಾರಂಭಿಸಲು ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಕಳೆದ ವಿಧಾನಮಂಡಲದ ಅಧಿವೇಶನದಲ್ಲಿ ಅನುಮೋದನೆಗೊಂಡ ವರ್ಗಾವಣಾ ಕಾಯ್ದೆಯ ನಿಯಮಗಳನ್ನು ಶೀಘ್ರ ರೂಪಿಸಿ ವರ್ಗಾವಣಾ ವೇಳಾಪಟ್ಟಿ ಪ್ರಕಟಿಸಲು ನಿರ್ದೇಶನ ನೀಡಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಅರುಣ ಶಹಾಪುರ, ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್. ಆರ್. ಉಮಾಶಂಕರ್, ಆಯುಕ್ತ ಡಾ. ಕೆ.ಜೆ. ಜಗದೀಶ್, ಎಸ್‌ಎಸ್ ಕೆ ಯೋಜನಾ ನಿರ್ದೇಶಕ ಡಾ. ಎಂ.ಟಿ. ರೇಜು, ಪಿಯು ಇಲಾಖೆ ನಿರ್ದೇಶಕಿ ಕನಗವಲ್ಲಿಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

## ಮೈಸೂರು ಮೃಗಾಲಯಕ್ಕೆ ಜೀಬ್ರಾ, ಜಿರಾಫೆ ದತ್ತು ಸ್ವೀಕಾರ

ಬೆಂಗಳೂರು, ಮೇ 7 ( ಕರ್ನಾಟಕ ವಾರ್ತೆ ) :

**ಮೈಸೂರಿನ ಶ್ರೀ ಚಾಮರಾಜೇಂದ್ರ ಮೃಗಾಲಯಕ್ಕೆ ಮೈಸೂರಿನ ಎನ್. ರಾಮಕೃಷ್ಣಯ್ಯ, ಅವರು 1.00 ಲಕ್ಷ ಪಾವತಿಸಿ ಜಿರಾಫೆಯನ್ನು ಒಂದು ವರ್ಷದ ಅವಧಿಗೆ ದತ್ತು ಸ್ವೀಕರಿಸಿರುತ್ತಾರೆ.**

**ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ ಕೆ.ಎಸ್ . ನವೀನ್ ಅವರು 50,000/– ಪಾವತಿಸಿ ಮೈಸೂರು ಮೃಗಾಲಯದ ಜೀಬ್ರಾ ವನ್ನು ಒಂದು ವರ್ಷದ ಅವಧಿಗೆ ಸ್ವೀಕರಿಸಿರುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.**